## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **549 (641)** |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.12.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳು ಯಾವ ಸಾಲಿನಿಂದ ಖಾಲಿ ಇವೆ: (ವಿವರ ನೀಡುವುದು) | <table><tr><th>ವಿವರ</th><th>ಸರ್ಕಾರಿ ಪ್ರಾಥಮಿಕ ಶಾಲೆ</th><th>ಸರ್ಕಾರಿ ಪ್ರೌಢಶಾಲೆ</th></tr><tr><td>ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳು</td><td>2645</td><td>1621</td></tr><tr><td>ವರ್ಷ</td><td>2008</td><td>2016–17</td></tr></table> |
| ಆ) | ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಶಿಕ್ಷಕರೆಂದು ಗುರುತಿಸಲಾಗುತ್ತಿದೆಯೇ; | ಹೌದು |
| ಇ) | ಈ ರೀತಿ ಹೆಚ್ಚುವರಿಯಾಗಿ ಗುರುತಿಸುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು; | **ಪ್ರಾಥಮಿಕ ಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ :-**<br>• ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 200 ಕ್ಕಿಂತ ಕಡಿಮೆ ಮಕ್ಕಳ ಸಂಖ್ಯೆ ಇರುವ ಕರ್ತವ್ಯ ನಿರತ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಎಂದು ಗುರುತಿಸಲಾಗುವುದು.<br>• ಸದರಿ ಹೆಚ್ಚುವರಿ ಶಿಕ್ಷಕರನ್ನು 200 ಕ್ಕಿಂತ ಮಕ್ಕಳ ದಾಖಲಾತಿ ಇರುವ ಶಾಲೆಗಳಲ್ಲಿ ಮರು ಹೊಂದಾಣಿಕೆ ಮಾಡಲಾಗುವುದು.<br>• ಒಂದು ವೇಳೆ 200 ಕ್ಕಿಂತ ಹೆಚ್ಚಿನ ಮಕ್ಕಳ ದಾಖಲಾತಿ ಇರುವ ಶಾಲೆಗಳು ಲಭ್ಯವಿಲ್ಲದಿದ್ದಲ್ಲಿ ಆಯಾ ತಾಲ್ಲೂಕಿನ ವ್ಯಾಪ್ತಿಯಲ್ಲಿ 200 ಕ್ಕಿಂತ ಕಡಿಮೆ ಪಿ.ಟಿ.ಆರ್. ಹೊಂದಿರುವ ಶಾಲೆಯನ್ನು ಇಳಿಕೆ ಕ್ರಮಾಂಕದಲ್ಲಿ ಗುರುತಿಸಿ ಅಂತಹ ಶಾಲೆಗಳಿಗೆ ಹೆಚ್ಚುವರಿ ಎಂದು ಗುರುತಿಸಲ್ಪಟ್ಟ ದೈಹಿಕ ಶಿಕ್ಷಣ ಶಿಕ್ಷಕರನ್ನು Rationalization ಮೂಲಕ ಮರುಹೊಂದಾಣಿಕೆ ಮಾಡಲಾಗುವುದು. |

| | | |
|---|---|---|
| | | **ಪ್ರೌಢಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ :-**<br>• ಒಂದು ಪ್ರೌಢಶಾಲೆಗೆ 1 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಲಾಗಿರುತ್ತದೆ.<br>• ಸರ್ಕಾರಿ ಪ್ರೌಢಶಾಲೆಯಲ್ಲಿ 10 ಅಥವಾ 10ಕ್ಕಿಂತ ಹೆಚ್ಚು ವಿಭಾಗಗಳಿದ್ದಲ್ಲಿ 2ನೇ ದೈಹಿಕ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.<br>• ಸರ್ಕಾರಿ ಪ್ರೌಢ ಶಾಲೆಯಲ್ಲಿ 10 ವಿಭಾಗಗಳಿಗಿಂತ ಕಡಿಮೆ ವಿಭಾಗಗಳಿದ್ದು ಈ ಶಾಲೆಯಲ್ಲಿ 2 ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದರೆ ಅಂತಹ ಶಾಲೆಯಲ್ಲಿ 1 ದೈಹಿಕ ಶಿಕ್ಷಕರನ್ನು ಉಳಿಸಿ ಮತ್ತೊಬ್ಬರನ್ನು ಹೆಚ್ಚುವರಿ ಎಂದು ಗುರುತಿಸಲಾಗಿರುತ್ತದೆ.<br>• ಹೀಗೆ ಗುರುತಿಸಲಾಗಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ದೈಹಿಕ ಶಿಕ್ಷಕರುಗಳಿಗೆ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಕಾಯ್ದೆ-ನಿಯಮ ಸೆಕ್ಷನ್-10(1) ರಲ್ಲಿ ನಿಗಧಿಪಡಿಸಿರುವ ಯಾವುದೇ ವಿನಾಯಿತಿಗಳಿಗೆ ಅರ್ಹರಾಗಿರುವುದಿಲ್ಲ. ಅಂತಹ ಶಿಕ್ಷಕರನ್ನು ಕಡ್ಡಾಯವಾಗಿ ಹೆಚ್ಚುವರಿ ಎಂದು ಗುರುತಿಸಲಾಗುವುದು. ಅಂತಹ ಶಿಕ್ಷಕರನ್ನು ಅಗತ್ಯತೆ ಇರುವ ಶಾಲೆಗಳಿಗೆ Rationalization ಮೂಲಕ ಮರು ಹೊಂದಾಣಿಕೆ ಕ್ರಮ ಕೈಗೊಂಡು ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿಗೊಳಿಸಲಾಗುವುದು. |
| ಈ) | ಪ್ರಸಕ್ತ ಸಾಲಿನಲ್ಲಿ ಎಷ್ಟು ಜನ ದೈಹಿಕ ಶಿಕ್ಷಕರನ್ನು ಹೆಚ್ಚುವರಿ ಶಿಕ್ಷಕರೆಂದು ಗುರುತಿಸಲಾಗಿದೆ: | 1. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಗುರುತಿಸಲಾದ ಹೆಚ್ಚುವರಿ ದೈಹಿಕ ಶಿಕ್ಷಕರ ಸಂಖ್ಯೆ: 902<br>2. ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಗುರುತಿಸಲಾದ ಹೆಚ್ಚುವರಿ ದೈಹಿಕ ಶಿಕ್ಷಕರ ಸಂಖ್ಯೆ: 03 |
| ಉ) | ದೈಹಿಕ ಶಿಕ್ಷಣ ವಿಭಾಗದಲ್ಲಿ ಹೆಚ್ಚುವರಿ ಎಂದು ಗುರುತಿಸಿ ಶಿಕ್ಷಕರನ್ನು ನಿಯೋಜನೆಗೊಳಿಸುವುದರಿಂದ ವಿದ್ಯಾರ್ಥಿಗಳ ದೈಹಿಕ ಶಿಕ್ಷಣಕ್ಕೆ ಅನ್ಯಾಯ ಉಂಟಾಗುವುದಿಲ್ಲವೇ; | • ಹೆಚ್ಚುವರಿ ಎಂದು ಗುರುತಿಸಲಾಗಿರುವ ದೈಹಿಕ ಶಿಕ್ಷಕರನ್ನು ಪ್ರಾಥಮಿಕ ಶಾಲೆಯಲ್ಲಿ 200 ಕ್ಕಿಂತ ಹೆಚ್ಚು ಮಕ್ಕಳ ದಾಖಲಾತಿ ಇರುವ ಶಾಲೆಗಳಿಗೆ Rationalization ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುವುದು.<br>• ಪ್ರತಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಂದು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾತಿ ಇರುವುದರಿಂದ ದೈಹಿಕ ಶಿಕ್ಷಣದ ಪ್ರಯೋಜನ ಎಲ್ಲಾ ವಿದ್ಯಾರ್ಥಿಗಳಿಗೆ ಲಭ್ಯವಾಗುತ್ತದೆ. |
| ಊ) | ಹಾಗಾದಲ್ಲಿ. ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | |

| | | |
|---|---|---|
| | | • ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕೆಲವು ಶಾಲೆಯಲ್ಲಿ ದೈಹಿಕ ಶಿಕ್ಷಕರಿದ್ದು ಹತ್ತಿರದ ಶಾಲೆಯಲ್ಲಿ ದೈಹಿಕ ಶಿಕ್ಷಕರ ಕೊರತೆ ಅಥವಾ ದೈಹಿಕ ಶಿಕ್ಷಕರ ಅಗತ್ಯತೆ ಇದ್ದಲ್ಲಿ ಅಂತಹ ಶಾಲೆಗಳಿಗೆ ತಾತ್ಕಾಲಿಕವಾಗಿ ದೈಹಿಕ ಶಿಕ್ಷಕರನ್ನು ದಿನ ಬಿಟ್ಟು ದಿನ ಅಥವಾ ವಾರದಲ್ಲಿ 3ದಿನ ನಿಯೋಜನೆ ಮಾಡುವುದರ ಮೂಲಕ ಮಕ್ಕಳಿಗೆ ದೈಹಿಕ ಶಿಕ್ಷಣದ ಪ್ರಯೋಜನ ಲಭ್ಯವಾಗುವಂತೆ ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮವಹಿಸುತ್ತಾರೆ. ಇದರಿಂದ ದೈಹಿಕ ಶಿಕ್ಷಣಕ್ಕೆ ಅನ್ಯಾಯವಾಗಿರುವುದಿಲ್ಲ. |

ಇಪಿ 196 ಎಲ್‌ಬಿಪಿ 2023

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು